ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 : ಸೆಪ್ಟೆಂಬರ್ 22, 2015

**ಪತ್ರಿಕಾ ಪ್ರಕಟಣೆ**

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಆರ್ಥಿಕ ಅಶಿಸ್ತು, 1335 ಕೋಟಿ ರೂ ಬಳಕೆಯಾಗದ ಅನುದಾನ : ಹೆಚ್. ಕೆ. ಪಾಟೀಲ್

**ಬೆಂಗಳೂರು, ಸೆಪ್ಟೆಂಬರ್ 22 ( ಕರ್ನಾಟಕ ವಾರ್ತೆ ) :**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಆರ್ಥಿಕ ಅಶಿಸ್ತು ಕಂಡು ಬಂದಿದ್ದು, ಮಾರ್ಚ್ ಅಂತ್ಯಕ್ಕೆ ಬಳಕೆಯಾಗದ ಅನುದಾನ 1335.89 ಕೋಟಿ ರೂ. ಪೈಕಿ 505.68 ಕೋಟಿ ರೂ. ಅನುದಾನವು ದೀರ್ಘ ಕಾಲದಿಂದಲೂ ಬಳಕೆಯಾಗದೆ ಉಳಿದಿರುವ ಪ್ರಕರಣ ಬೆಳಕಿಗೆ ಬಂದಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಶ್ರೀ ಹೆಚ್. ಕೆ. ಪಾಟೀಲ್ ಅವರು ಪ್ರಕಟಿಸಿದರು.

ಭಾರತೀಯ ಅರಣ್ಯ ಸೇವೆಯ ಅಧಿಕಾರಿ ಶ್ರೀ ಪುನಟಿ ಶ್ರೀಧರ್ ಅವರ ನೇತೃತ್ವದಲ್ಲಿ ರಚಿಸಲಾಗಿದ್ದ ಸಮಿತಿಯು ಸಲ್ಲಿಸಿದ ಅಂತಿಮ ವರದಿಯನ್ನು ಬಿಡುಗಡೆ ಮಾಡಿ, ನಗರದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಿದ್ದ ಸಚಿವರು ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳಿಗೆ ಬಿಡುಗಡೆಯಾದ ಅನುದಾನವು ಕಾಮಗಾರಿಗಳ ಉದ್ದೇಶ ಹಾಗೂ ಉಪಯೋಗಕ್ಕೆ ಬಳಕೆಯಾದೆ ವಿವಿಧ ಬ್ಯಾಂಕ್ ಖಾತೆಗಳಲ್ಲಿ ಹಾಗೂ ಇತರೆ ಸಂಸ್ಥೆಗಳಲ್ಲಿ ಠೇವಣಿಯಾಗಿರುವ ಪ್ರಕರಣ ಬಯಲಾಗಿದೆ. ಲಭ್ಯವಿರುವ ಮಾಹಿತಿಯಂತೆ 1128 ಬ್ಯಾಂಕ್ ಖಾತೆಗಳಲ್ಲಿ ಠೇವಣಿ ಇರಿಸಿದ್ದ ಅನುದಾನವು ಯೋಜಿತ ಉದ್ದೇಶಕ್ಕೆ ಬಳಕೆಯಾಗದೆ ಆರ್ಥಿಕ ಅಶಿಸ್ತು ಕಂಡು ಬಂದಿದೆ ಎಂದರು.

ಸಮಿತಿಯ ವರದಿಯಿಂದ ಬ್ಯಾಂಕ್ ಖಾತೆಗಳಲ್ಲಿ ಹಣವನ್ನು ಮನಸೋ ಇಚ್ಛೆ ನಿರ್ವಹಿಸಿರುವ ಪ್ರಕರಣಗಳು ಗಮನಕ್ಕೆ ಬಂದಿವೆ. ಶ್ರೀಧರ್ ಸಮಿತಿಯು ಹಲವು ಗಂಭೀರ ವಿಷಯಗಳನ್ನು ಸರ್ಕಾರದ ಗಮನಕ್ಕೆ ತಂದಿದೆ. ಅಲ್ಲದೆ, ಒಂಭತ್ತು ಅಂಶಗಳನ್ನು ಗಂಭೀರವಾಗಿ ಪರಿಗಣಿಸಿ 12 ಶಿಫಾರಸ್ಸುಗಳನ್ನು ಮಾಡಿದೆ ಎಂದು ತಿಳಿಸಿದರು.

ಇಲಾಖೆಯಲ್ಲಿನ ಆರ್ಥಿಕ ಅಶಿಸ್ತು ಪತ್ತೆ ಹಚ್ಚಲು ರಚಿಸಲಾದ ಈ ಸಮಿತಿಯು ಈ ಹಿಂದೆ ಮೂರು ಮಧ್ಯಂತರ ವರದಿಗಳನ್ನು ನೀಡಿತ್ತು. ಈ ವಿಚಾರವನ್ನು ತಾವು ಮುಖ್ಯಮಂತ್ರಿಯವರ ಗಮನಕ್ಕೆ ತಂದಾಗ, ರಾಜ್ಯ ಲೆಕ್ಕ ಪತ್ರ ಇಲಾಖೆಯಿಂದ ಮತ್ತೊಮ್ಮೆ ಲೆಕ್ಕ ಪರಿಶೋಧನೆ ಮಾಡಿಸಿ ಎರಡು ತಿಂಗಳೊಳಗೆ ಸಮಗ್ರ ವರದಿಯನ್ನು ತರಿಸಿಕೊಂಡು ಅಕ್ರಮಗಳು ಕಂಡು ಬಂದಲ್ಲಿ ತಪ್ಪಿತಸ್ಥರ ವಿರುದ್ಧ ಕಠಿಣ ಹಾಗೂ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದರ ಜೊತೆಗೆ ಇಂತಹ ಪ್ರಕರಣಗಳು ಮತ್ತೆ ಮರುಕಳಿಸದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದ್ದಾರೆ ಎಂದು ಹೇಳಿದರು.

ಕರ್ನಾಟಕ ಗ್ರಾಮೀಣ ಮೂಲಸೌಲಭ್ಯ ಅಭಿವೃದ್ಧಿ ಸಂಸ್ಥೆಯಲ್ಲಿ 3008 ಕೋಟಿ ರೂ.ಗಳಿಗೂ ಅಧಿಕ ಅನುದಾನವು ಲೆಕ್ಕಪತ್ರ ಹೊಂದಾಣಿಯಾಗದೇ ಇರುವ ಗಂಭೀರ ಪ್ರಕರಣಗಳು ಬೆಳಕಿಗೆ ಬಂದಿದೆ ಎಂದು ತಿಳಿಸಿದ ಶ್ರೀ ಹೆಚ್. ಕೆ. ಪಾಟೀಲ್ ಅವರು ಈ ಸಂಸ್ಥೆಯಲ್ಲಿ ಕೆಲವು ಅಧಿಕಾರಿಗಳ ಖಾತೆಗೆ ಅನುದಾನ ಜಮೆ ಆಗಿರುವುದು ಆರ್ಥಿಕ ಶಿಸ್ತಿನ ಉಲ್ಲಂಘನೆಯ ಸ್ಪಷ್ಟ ಉದಾಹರಣೆಯಾಗಿದೆ ಎಂದು ವಿವರಿಸಿದರು.

*************

ಡಿ ಪಿ ಎಂ : ಕೆ ಪಿ ಪಿ